**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು. ದಿನಾಂಕ : 19-08-2023.**

**ಮುಖ್ಯ ವಿಚಾರಣೆ - ವಾದಿಯ ಪರ ವಕೀಲರಿಂದ :**

**1)** ಈ ದಿನ ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸಿ ಸಾಕ್ಷಿ ನುಡಿಯುತ್ತಿದ್ದೇನೆ.

**2)** ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

**3)** ನೋಂದಾಯಿತ ವಿಲ್ ನಾಮೆ ದಿನಾಂಕ 10-06-1998 ರ ಮೂಲ ದಾಖಲೆಯನ್ನು - ನಿ.ಪಿ.1 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ ಪಹಣಿ ಪತ್ರಿಕೆಗಳನ್ನು - ನಿ.ಪಿ.2 ರಿಂದ ನಿ.ಪಿ.5 ಎಂದು ಗುರುತಿಸಲಾಯಿತು. ಉಪವಿಭಾಗಾಧಿಕಾರಿಗಳ ಆದೇಶ ದಿ.11-03-2005 ರ ದೃಢೀಕೃತ ನಕಲನ್ನು - ನಿ.ಪಿ.6 ಎಂದು ಗುರುತಿಸಲಾಯಿತು. ಉಪವಿಭಾಗಾಧಿಕಾರಿಗಳ ಆದೇಶ ದಿ.05-05-2012 ರ ದೃಢೀಕೃತ ನಕಲನ್ನು - ನಿ.ಪಿ.7 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಾದಿಗಳ ಪರ ವಕೀಲರು ಕಾಲಾವಕಾಶವನ್ನು ಕೋರಿರುವುದರಿಂದ, ಕಾಲಾವಕಾಶವನ್ನು ನೀಡಿ, ಪ್ರಕರಣವನ್ನು ಮುಂದೂಡಲಾಯಿತು.

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ.ಕೇ.ಸ.ಇ. ಎಂದು ಒಪ್ಪಿಕೊಂಡಿರುತ್ತಾರೆ,

Sd./-
**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ.,**
**ದೇವನಹಳ್ಳಿ.**